<u>ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಿ.ಜಿ ಪಾಟೀಲ್, ಇವರ ಗಮನ ಸೆಳೆಯುವ ಸೂಚನೆಗೆ ಮಾಹಿತಿ:</u>

<u>ಸೂಚನೆ:</u>

ಕಲಬುರಗಿ ಜಿಲ್ಲೆಯಲ್ಲಿ ಕಳೆದ 15-20 ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ನೌಕರರಿಗೆ ಮಾಸಿಕ ವೇತನವನ್ನು ಕನಿಷ್ಠ ರೂ. 31,000/- ಗಳಿಗೆ ನಿಗದಿಪಡಿಸಿ ಅವರನ್ನು ಖಾಯಂ ಮಾಡುವುದರ ಜೊತೆಗೆ ಬೀದರ್ ಮಾದರಿಯಲ್ಲಿ ಸಹಕಾರ ಸಂಘದ ಸೊಸೈಟಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಾರಿ ಮಾಡುವ ಕುರಿತು

<u>ಹೇಳಿಕೆ:</u>

ಕನಿಷ್ಠ ವೇತನ ಕಾಯ್ದೆ, 1948 ರಡಿ ಪ್ರಸ್ತುತ 81 ಅನುಸೂಚಿತ ಉದ್ದಿಮೆಗಳಲ್ಲಿ ಕೆಲಸ ನಿರ್ವಹಿಸುವ ಎಲ್ಲಾ ವರ್ಗದ ಕಾರ್ಮಿಕರಿಗೆ ಸರ್ಕಾರವು ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಿ / ಪರಿಷ್ಕರಿಸಿ ಅಧಿಸೂಚನೆಗಳನ್ನು ಹೊರಡಿಸುತ್ತಿದೆ.

2022-23 ನೇ ಸಾಲಿನಲ್ಲಿ ಹೊರಗುತ್ತಿಗೆ ನೌಕರರನ್ನೂ ಒಳಗೊಂಡಂತೆ ಒಟ್ಟು 34 ಅನುಸೂಚಿತ ಉದ್ದಿಮೆಗಳಿಗೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ ಸರ್ಕಾರವು ಅಧಿಸೂಚನೆಗಳನ್ನು ಹೊರಡಿಸಿರುತ್ತದೆ. ಸದರಿ ಅಧಿಸೂಚನೆಗಳನ್ನು ಗೌರವಾನ್ವಿತ ಕರ್ನಾಟಕ ಉಚ್ಛ ನ್ಯಾಯಾಲಯವು ದಿನಾಂಕ: 26-9-2023 ರ ತೀರ್ಪುಗಳಲ್ಲಿ ರದ್ದುಪಡಿಸಿ, ಮೆ|| ರೆಪ್ಟಕೋಸ್ ಬ್ರೆಟ್ ಅಂಡ್ ಕಂ., ಪ್ರಕರಣದಲ್ಲಿ ನೀಡಿರುವ ಮಾರ್ಗಸೂಚಿಗಳನ್ನನುಸರಿಸಿ ಕನಿಷ್ಠ ವೇತನ ಲೆಕ್ಕಾಚಾರ ಮಾಡಿ ಹೊಸದಾಗಿ ಅಧಿಸೂಚನೆಯನ್ನು ಹೊರಡಿಸುವಂತೆ ನಿರ್ದೇಶಿಸಿರುತ್ತದೆ.

ಗೌರವಾನ್ವಿತ ನ್ಯಾಯಾಲಯದ ಸದರಿ ತೀರ್ಪನ್ನು ಪ್ರಶ್ನಿಸಿ ವಿವಿಧ ಆಡಳಿತ ವರ್ಗದವರು ಮಾನ್ಯ ನ್ಯಾಯಾಲಯದಲ್ಲಿ ಮೇಲ್ಮನವಿ ಅರ್ಜಿಗಳನ್ನು ಸಲ್ಲಿಸಿದ್ದು, ಗೌರವಾನ್ವಿತ ನ್ಯಾಯಾಲಯವು ದಿನಾಂಕ: 13-12-2024 ಹೊರಡಿಸಿರುವ ತೀರ್ಪಿನಲ್ಲಿ, ಪ್ರಕರಣಗಳನ್ನು ಏಕಸದಸ್ಯ ಪೀಠಕ್ಕೆ ಹಿಂದಿರುಗಿಸಿ, ಮಾಲೀಕ ವರ್ಗದ ಪ್ರತಿನಿಧಿಗಳ ಹೇಳಿಕೆಗಳಿಗೆ ಅವಕಾಶ ನೀಡಿ, ಪ್ರಕರಣಗಳ ವಿಚಾರಣೆ ನಡೆಸಿ, ಹತ್ತು ವಾರಗಳೊಳಗೆ ನಿಯಮಾನುಸಾರ ತೀರ್ಪು ಹೊರಡಿಸುವಂತೆ ನಿರ್ದೇಶಿಸಿರುತ್ತದೆ.

ಹತ್ತು ವಾರಗಳ ಕಾಲಾವಕಾಶ ಮುಕ್ತಾಯವಾಗಿದ್ದು, ಇದುವರೆಗೂ ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣೆ ಪ್ರಾರಂಭವಾಗಿರುವುದಿಲ್ಲ. ಈ ಸಂಬಂಧ ವೇತನ ಪರಿಷ್ಕರಣೆ ಕುರಿತು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.

ಹೊರಗುತ್ತಿಗೆ ನೌಕರರನ್ನು ಖಾಯಂ ಮಾಡುವ ವಿಷಯವು, ಆಯಾ ಇಲಾಖೆಯ ನೇಮಕಾತಿ ನಿಯಮಗಳು ಹಾಗೂ ಸರ್ಕಾರದ ನೀತಿ-ನಿರೂಪಣೆಗೆ ಒಳಪಡುವ ವಿಷಯವಾಗಿರುತ್ತದೆ.

ಸರ್ಕಾರದ ವಿವಿಧ ಇಲಾಖೆಗಳು/ನಿಗಮ/ಮಂಡಳಿಗಳಲ್ಲಿ ಕೆಲಸ ಮಾಡುವ ಹೊರಗುತ್ತಿಗೆ ನೌಕರಿಗೆ ಸರಿಯಾದ ಸಮಯದಲ್ಲಿ ಸರ್ಕಾರ ನಿಗದಿಪಡಿಸಿದ ಕನಿಷ್ಠ ವೇತನ ಪಾವತಿಯಾಗದ ಕುರಿತು ಕ್ರಮವಾಗಿ ವೇತನ ಪಾವತಿ ಕಾಯ್ದೆ, 1936, ಕನಿಷ್ಠ ವೇತನ ಕಾಯ್ದೆ, 1948ರಡಿ ಮತ್ತು ಉಪಧನ ಪಾವತಿ ಕಾಯ್ದೆ, 1972ಕ್ಕೆ ಸಂಬಂಧಿಸಿದ ಹಾಗೂ ಶಾಸನಾತ್ಮಕ ಸೌಲಭ್ಯಗಳಾದ ಇ.ಎಸ್.ಐ. ಮತ್ತು ಪಿ.ಎಫ್ ವಂತಿಕೆಯನ್ನು ಸಕಾಲದಲ್ಲಿ ಸಂಬಂಧಿಸಿದ ಇಲಾಖೆಗಳಲ್ಲಿನ ನೌಕರರ ಖಾತೆಗೆ ಜಮೆ ಮಾಡದೇ ಇರುವುದು ಕಂಡು ಬಂದಿದ್ದು, ಇಂತಹ ಶಾಸನಾತ್ಮಕ ಸೌಲಭ್ಯಗಳಿಂದ ವಂಚಿತರಾದ ಹೊರಗುತ್ತಿಗೆ ನೌಕರರಿಗೆ ಎಲ್ಲಾ ಶಾಸನಾತ್ಮಕ ಸೌಲಭ್ಯಗಳನ್ನು ಒದಗಿಸಿಕೊಡುವುದು ಸರ್ಕಾರದ ಉದ್ದೇಶವಾಗಿರುತ್ತದೆ.

ಅದರಂತೆ, ಹೊರಗುತ್ತಿಗೆ ನೌಕರರ ಹಿತದೃಷ್ಟಿಯಿಂದ ಸರ್ಕಾರವು ಆದೇಶ ಸಂಖ್ಯೆ: ಕಾಇ 301 ಎಲ್‌ಡಬ್ಲ್ಯೂಎ 2023, ದಿನಾಂಕ: 01-10-2024 ರನ್ವಯ ಬೀದರ್ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ರಚಿಸಿರುವಂತೆ "ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ (ನಿ)" ವನ್ನು ಅದೇ ಮಾದರಿಯಲ್ಲಿಯೇ ಪ್ರಾಯೋಗಿಕವಾಗಿ ಮೈಸೂರು, ಧಾರವಾಡ ಮತ್ತು ತುಮಕೂರು ಜಿಲ್ಲೆಗಳಲ್ಲಿ ಹೊರಗುತ್ತಿಗೆ ಕಾರ್ಮಿಕರ ಸೇವೆಗಳನ್ನು ಒದಗಿಸುವ ಸಂಬಂಧ ಸೊಸೈಟಿ ಪ್ರಾರಂಭಿಸಲು ಸಹಕಾರ ಸಂಘಗಳ ಕಾಯ್ದೆ, 1959ರ ಕಲಂ 7 ರನ್ವಯ ನೋಂದಾಯಿಸಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. (ಮಾಹಿತಿಯನ್ನು ಅನುಬಂಧ-1 ರಲ್ಲಿ ಸಲ್ಲಿಸಿದೆ) ಮತ್ತು ಸದರಿ ಜಿಲ್ಲೆಗಳಲ್ಲಿ ಸಂಘ ಸ್ಥಾಪಿಸಿ, ನೋಂದಾಯಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

83 6

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಬಿ.ಜಿ ಪಾಟೀಲ್ ನಿಯಮ-72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ:

**ಪ್ರಶ್ನೆ:**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕಳೆದ 15-20 ವರ್ಷಗಳಿಂದ ಕಡಿಮೆ ಸಂಬಳಕ್ಕೆ ವಸತಿ ನಿಲಯ-ಶಾಲಾ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಅಡುಗೆಯವರು, ಡಾಟಾ ಎಂಟ್ರಿ ಆಪರೇಟರ್‌ಗಳು, ಹೊರಗುತ್ತಿಗೆ ಶಿಕ್ಷಕರು, ದಿನಗೂಲಿ ಶಿಕ್ಷಕರು ಯಾವುದೇ ಸೇವಾ ಭದ್ರತೆ ಇಲ್ಲದೆ ನಿರಂತರವಾಗಿ ಕೆಲಸ ಮಾಡುತ್ತಾ ಬಂದಿರುತ್ತಾರೆ. ಗುತ್ತಿಗೆದಾರರು, ವಾರ್ಡನ್‌ರವರು, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಹೊರಗುತ್ತಿಗೆ ಸಿಬ್ಬಂದಿಗಳನ್ನು ಶೋಷಣೆ ಮಾಡುತ್ತಿರುತ್ತಾರೆ. ಸದರಿ ನೌಕರರನ್ನು ಖಾಯಂ ಮಾಡುವುದರ ಜೊತೆಗೆ ಅವರ ಶೋಷಣೆಯನ್ನು ಹೋಗಲಾಡಿಸಿ, ಅವರ ಮಾಸಿಕ ವೇತನವನ್ನು ಕನಿಷ್ಠ 31,000/-ಕ್ಕೆ ಏರಿಸುವುದರ ಜೊತೆಗೆ, ಬೀದರ್ ಮಾದರಿಯಲ್ಲಿ ಸಹಕಾರ ಸಂಘದ ಸೊಸೈಟಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಾರಿ ಮಾಡುವುದು ಹಾಗೂ ಹೊರಗುತ್ತಿಗೆ ಸಿಬ್ಬಂದಿಗಳ ಹಲವು ಬೇಡಿಕೆಗಳನ್ನು ಈಡೇರಿಸುವ ಸಂಬಂಧ ಮಾನ್ಯ ಮಾನ್ಯಮುಖ್ಯಮಂತ್ರಿಯವರಲ್ಲಿ ಗಮನ ಸೆಳೆಯ ಬಯಸುತ್ತೇನೆ.**

*********

**ಉತ್ತರ.**

### ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ:-

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 134 ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರ ಬಾಲಕರ/ಬಾಲಕಿಯರ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು ಈ ನಿಲಯಗಳಿಗೆ ಒಟ್ಟು 574 ಗ್ರೂಪ್–ಡಿ ವೃಂದದ ಅಡುಗೆಯವರು/ಅಡುಗೆ ಸಹಾಯಕರು/ಕಾವಲುಗಾರರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 279 ಹುದ್ದೆಗಳು ಭರ್ತಿಯಾಗಿದ್ದು, 295 ಹುದ್ದೆಗಳು ಖಾಲಿ ಇರುತ್ತದೆ ಹಾಗೂ ಜಿಲ್ಲೆಯಲ್ಲಿನ 07 ತಾಲ್ಲೂಕು ಕಛೇರಿಗಳಿಗೆ ಮಂಜೂರಾಗಿರುವ 07 ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳಿಗೂ ಸಹ ಹೊರ ಸಂಪನ್ಮೂಲ ಏಜೆನ್ಸಿ ಮೂಲಕ ಸಿಬ್ಬಂದಿಗಳ ಸೇವೆಯನ್ನು ಪಡೆದುಕೊಳ್ಳಲಾಗಿರುತ್ತದೆ.

ಏಜೆನ್ಸಿಯವರು ಹೊರಸಂಪನ್ಮೂಲ ಸಿಬ್ಬಂದಿಗಳಿಗೆ ಪ್ರತಿ ಮಾಹೆಯ ವೇತನವನ್ನು ಆರ್.ಟಿ.ಜಿ.ಎಸ್ ಮೂಲಕ ಸಂಬಂಧಿಸಿದ ಸಿಬ್ಬಂದಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡುತ್ತಿದ್ದು ವೇತನವನ್ನು ಜಮೆ ಮಾಡಿರುವ ಬಗ್ಗೆ ದೃಢಪಡಿಸಿಕೊಳ್ಳಲಾಗಿರುತ್ತದೆ. ಹಾಗೂ ಹೊರಸಂಪನ್ಮೂಲ ಸಿಬ್ಬಂದಿಗಳಿಗೆ ಪ್ರತಿ ತಿಂಗಳು ವೇತನ, ಇಪಿಎಫ್ ಮತ್ತು ಇಎಸ್‌ಐಯನ್ನು ನಿಯಮಾನುಸಾರ ಏಜೆನ್ಸಿಯವರು ಹೊರಸಂಪನ್ಮೂಲ ಸಿಬ್ಬಂದಿಗಳ ಖಾತೆಗೆ ಜಮೆ ಮಾಡುತ್ತಿರುವುದನ್ನು ಸಹ ದೃಢಪಡಿಸಿಕೊಳ್ಳಲಾಗುತ್ತಿದೆ. ಈ ಬಗ್ಗೆ ಪರಿಶೀಲನೆ ಮಾಡಿ ದೃಢಪಡಿಸಿಕೊಂಡ ನಂತರ ಮುಂದಿನ ತಿಂಗಳ ವೇತನವನ್ನು ಏಜೆನ್ಸಿಯವರಿಗೆ ಪಾವತಿಸಲಾಗುತ್ತಿದೆ.

ಆರ್ಥಿಕ ಇಲಾಖೆಯಿಂದ ಬೀದರ್ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿದೋದ್ದೇಶ ಸಹಕಾರ ಸಂಘದಿಂದ ಮಾನವ ಸಂಪನ್ಮೂಲ ಸೇವೆಯನ್ನು ಒಂದು ವರ್ಷದ ಅವಧಿಗೆ ನೇರವಾಗಿ ಪಡೆಯಲು

ಕೆಟಿಟಿಪಿ ನಿಯಮಗಳನ್ವಯ ವಿನಾಯಿತಿ ನೀಡಲಾಗಿರುತ್ತದೆ. ಸದರಿ ವಿನಾಯಿತಿಯು ಬೀದರ್ ಜಿಲ್ಲೆಗೆ ಮಾತ್ರ ಅನ್ವಯವಾಗುತ್ತಿದ್ದು, ಉಳಿದ ಜಿಲ್ಲೆಗಳಿಗೆ ಈ ವಿನಾಯಿತಿ ಅನ್ವಯಿಸದೇ ಇರುವುದರಿಂದ, ನಿಯಮಾನುಸಾರ ಟೆಂಡರ್ ಆಹ್ವಾನಿಸಿ ಎಲ್ಲಾ ಅರ್ಹತೆಗಳನ್ನು ಪೂರೈಸಿದ ಹಾಗೂ ಕಡಿಮೆ ಸೇವಾ ಶುಲ್ಕ ನಮೂದಿಸಿದ ಹೊರಸಂಪನ್ಮೂಲ ಏಜೆನ್ಸಿಗೆ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಾರ್ಯಾದೇಶ ನೀಡಿರುತ್ತಾರೆ.

ಇಲ್ಲಿಯವರೆಗೆ ಹೊರಗುತ್ತಿಗೆ ಸಿಬ್ಬಂದಿಗಳಿಗೆ ಇಲಾಖಾ ಅಧಿಕಾರಿ/ಸಿಬ್ಬಂದಿಗಳಿಂದ ಮತ್ತು ಏಜೆನ್ಸಿಯವರಿಂದ ಶೋಷಣೆ ಆಗಿರುವ ಬಗ್ಗೆ, ಯಾವುದೇ ದೂರುಗಳು ಸ್ವೀಕೃತಿಗೊಂಡಿರುವುದಿಲ್ಲ.

**ಸಮಾಜ ಕಲ್ಯಾಣ ಇಲಾಖೆ:-**

ಕಲಬುರಗಿ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯ, ವಸತಿ ಶಾಲೆ, ಜಿಲ್ಲಾ/ತಾಲ್ಲೂಕು ಕಛೇರಿಗಳಲ್ಲಿ ಹೊರಸಂಪನ್ಮೂಲ ಸೇವೆ ಮೇರೆಗೆ ಕರ್ತವ್ಯನಿರ್ವಹಿಸುತ್ತಿರುವ ಅಡುಗೆಯವರು, ಅಡುಗೆ ಸಹಾಯಕರು, ಬೆರಳಚ್ಚುಗಾರರುಗಳಾದ ಒಟ್ಟು 548 ಸಿಬ್ಬಂದಿಗಳಿಗೆ ಕಾಲಕಾಲಕ್ಕೆ ಕಾರ್ಮಿಕ ಇಲಾಖೆಯಿಂದ ನಿಗದಿಪಡಿಸುವ ದರದಲ್ಲಿ ವೇತನವನ್ನು ಪಾವತಿಸಲಾಗುತ್ತಿದೆ.

ವಸತಿ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಮಾತ್ರ ಮಾಸಿಕ ಗೌರವಧನ ಆಧಾರದ ಮೇಲೆ ರೂ.8,500/-ಗಳಂತೆ ಗೌರವಧನ ಪಾವತಿಸಲಾಗುತ್ತಿದ್ದು, ಈ ಮೊತ್ತವನ್ನು ಹೆಚ್ಚಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಪ್ರಸ್ತುತ ಆರ್ಥಿಕ ಇಲಾಖೆಯಲ್ಲಿ ಪರಿಶೀಲನಾ ಹಂತದಲ್ಲಿ ಇರುತ್ತದೆ.

ಬೀದರ್ ಮಾದರಿಯಲ್ಲಿ ಸಹಕಾರ ಸಂಘದ ಸೊಸೈಟಿಯನ್ವಯ ಎಲ್ಲಾ ಜಿಲ್ಲೆಗಳಲ್ಲಿ ಜಾರಿ ಮಾಡುವ ಕುರಿತು ಪರಿಶೀಲಿಸಿ ಕ್ರಮವಹಿಸಲು ದಿನಾಂಕ:20-06-2024ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕಾರ್ಮಿಕ ಇಲಾಖೆಯ ಆಯುಕ್ತರಿಗೆ ತಿಳಿಸಲಾಗಿರುತ್ತದೆ.

**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿನ ಕಲಬುರಗಿ ಜಿಲ್ಲೆಯ ವಿದ್ಯಾರ್ಥಿ ನಿಲಯ/ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 552 ಅಡುಗೆಯವರು, ಡಾಟಾ ಎಂಟ್ರಿ ಆಪರೇಟರ್‌ಗಳು ಅತಿಥಿ ಶಿಕ್ಷಕರಿಗೆ ಸರ್ಕಾರದಿಂದ ಕಾಲಕಾಲಕ್ಕೆ, ನಿಗದಿಪಡಿಸಿರುವ ಕನಿಷ್ಠ ವೇತನವನ್ನು ಪಾವತಿಸಲಾಗುತ್ತಿರುತ್ತದೆ ಹಾಗೂ ಗುತ್ತಿಗೆದಾರರು, ವಾರ್ಡನ್‌ನವರು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಹೊರಗುತ್ತಿಗೆ ಸಿಬ್ಬಂದಿಗಳನ್ನು ಶೋಷಣೆ ಮಾಡುತ್ತಿರುವ ಯಾವುದೇ ಪ್ರಕರಣಗಳು ನಿರ್ದೇಶನಾಲಯದಲ್ಲಿ ದಾಖಲಾಗಿರುವುದಿಲ್ಲ.

**ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ:-**

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 5 ವಿದ್ಯಾರ್ಥಿನಿಲಯಗಳಲ್ಲಿ ಅಡುಗೆಯವರು 12, ಅಡುಗೆ ಸಹಾಯಕರು 9 ಹಾಗೂ ಕಾವಲುಗಾರರು 4 ಸೇರಿ ಒಟ್ಟು 25 ಸಿಬ್ಬಂದಿಗಳನ್ನು ಹೊರಸಂಪನ್ಮೂಲ ಏಜೆನ್ಸಿ ಮೂಲಕ ನೇಮಿಸಿಕೊಳ್ಳಲಾಗಿರುತ್ತದೆ.

ಸದರಿ ಹೊರಸಂಪನ್ಮೂಲ ನೌಕರರಿಗೆ ಕನಿಷ್ಠ ವೇತನ ಕಾಯ್ದೆ (Minimum Wages Act)ಅನ್ವಯ ನಿಗಧಿಪಡಿಸಿದ ದರಗಳಲ್ಲಿ ಜಿಲ್ಲಾ ಹಂತದಲ್ಲಿ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಪಾವತಿಸಲಾಗುತ್ತಿದೆ.

**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ:-**

ಸರ್ಕಾರದ ಆದೇಶ ಸಂಖ್ಯೆ:ಸಕಇ 339 ಎಂಡಿಎಸ್ 2020 ದಿನಾಂಕ:20.02.2023ರಲ್ಲಿ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಮಾಹೆಯಾನ 18,150/- ಹಾಗೂ ಅತಿಥಿ ಶಿಕ್ಷಕರುಗಳಿಗೆ ಮಾಹೆಯಾನ ರೂ. 16,650/- ಗೌರವಧನವನ್ನು ಪಾವತಿಸಲು ಆದೇಶಿಸಲಾಗಿರುತ್ತದೆ. ಅದರಂತೆ ಅತಿಥಿ ಶಿಕ್ಷಕರು/ಉಪನ್ಯಾಸಕರುಗಳಿಗೆ ಪಾವತಿಬೇಕಾದ ವೇತನ ಬಾಬ್ತನ್ನು ಸಂಘದ ಶಾಲೆ/ಕಾಲೇಜುಗಳಿಗೆ ಬಿಡುಗಡೆ ಮಾಡಲಾಗುತ್ತಿದ್ದು ವಸತಿ ಶಾಲೆ/ಕಾಲೇಜುಗಳ ಪ್ರಾಂಶುಪಾಲರು ನೇರವಾಗಿ ಸದರಿ ಸಿಬ್ಬಂದಿಗಳಿಗೆ ಪಾವತಿಸಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 592 ಎಂಡಿಎಸ್ 2021 ದಿನಾಂಕ:04-12-2024ರಲ್ಲಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಸಂಪನ್ಮೂಲದ ಪ್ರಾಂಶುಪಾಲರು ಮಾಹೆಯಾನ ರೂ.18,150/- ಹಾಗೂ ಹೊರಸಂಪನ್ಮೂಲದ ಶಿಕ್ಷಕರುಗಳಿಗೆ ಮಾಹೆಯಾನ ರೂ.16,650/- ವೇತನವನ್ನು ಹೊರಸಂಪನ್ಮೂಲ ಏಜೆನ್ಸಿ ಮೂಲಕ ಪಾವತಿಸಲು ಆದೇಶಿಸಲಾಗಿರುತ್ತದೆ.

ಕಲಬುರಗಿ ಜಿಲ್ಲೆಯಲ್ಲಿ ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಎದುರಾಗಿ ಜಿಲ್ಲಾ ಮಟ್ಟದಲ್ಲಿ ಟೆಂಡರ್ ಆಹ್ವಾನಿಸಿ, ಬೋಧಕೇತರ ಹಾಗೂ ಗ್ರೂಪ್-ಡಿ ವೃಂದದ ಸಿಬ್ಬಂದಿಗಳ ಸೇವೆಯನ್ನು ಹೊರಸಂಪನ್ಮೂಲ ಏಜೆನ್ಸಿ ಮೂಲಕ ಪಡೆಯಲಾಗುತ್ತಿದೆ. 1 ಹೊರಸಂಪನ್ಮೂಲ ಬೋಧಕರು, 100 ಅತಿಥಿ ಶಿಕ್ಷಕರು ಹಾಗೂ 446 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ

ಗುತ್ತಿಗೆದಾರರು, ವಾರ್ಡನ್‌ನವರು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಹೊರಸಂಪನ್ಮೂಲ ಸಿಬ್ಬಂದಿಗಳನ್ನು ಶೋಷಣೆ ಮಾಡುತ್ತಿರುವ ಬಗ್ಗೆ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ.

ಕಾರ್ಮಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: KAE 51 I W 2022 dated 30.07.2022ರನ್ವಯ ವಲಯವಾರು ನಿಗದಧಿಪಡಿಸಿರುವ ಕನಿಷ್ಠ ವೇತನವನ್ನು ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳು ಹಾಗೂ ಗ್ರೂಪ್-ಡಿ ವೃಂದದ ಸಿಬ್ಬಂದಿಗಳಿಗೆ ಪಾವತಿಸಲಾಗುತ್ತಿದೆ. ಹೊರಸಂಪನ್ಮೂಲ ಸಿಬ್ಬಂದಿಗಳನ್ನು ಖಾಯಂ ಮಾಡಲು ನಿಯಮಾನುಸಾರ ಅವಕಾಶ ವಿರುವುದಿಲ್ಲ.

ಕಡತ ಸಂಖ್ಯೆ: STW/SECA/STP/56/2025

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ||ಬಿ.ಜಿ.ಪಾಟೀಲ್ ಇವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕಳೆದ 15-20 ವರ್ಷಗಳಿಂದ ಕಡಿಮೆ ಸಂಬಳಕ್ಕೆ ವಸತಿ ನಿಲಯ–ಶಾಲಾ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಅಡುಗೆಯವರು, ಡಾಟಾ ಎಂಟ್ರಿ ಆಪರೇಟರ್‌ಗಳು, ಹೊರಗುತ್ತಿಗೆ ಶಿಕ್ಷಕರು, ದಿನಗೂಲಿ ನೌಕರರು ಯಾವುದೇ ಸೇವಾ ಭದ್ರತೆ ಇಲ್ಲದೆ ನಿರಂತರವಾಗಿ ಕೆಲಸ ಮಾಡುತ್ತಾ ಬಂದಿರುತ್ತಾರೆ. ಗುತ್ತಿಗೆದಾರರು, ವಾರ್ಡನ್‌ರವರು, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಹೊರಗುತ್ತಿಗೆ ಸಿಬ್ಬಂದಿಗಳನ್ನು ಶೋಷಣೆ ಮಾಡುತ್ತಿರುತ್ತಾರೆ. ಸದರಿ ನೌಕರರನ್ನು ಖಾಯಂ ಮಾಡುವುದರ ಜೊತೆಗೆ ಅವರ ಶೋಷಣೆಯನ್ನು ಹೋಗಲಾಡಿಸಿ, ಅವರ ಮಾಸಿಕ ವೇತನವನ್ನು ಕನಿಷ್ಠ 31000/-ಕ್ಕೆ ಏರಿಸುವುದರ ಜೊತೆಗೆ, ಬೀದರ್ ಮಾದರಿಯಲ್ಲಿ ಸಹಕಾರ ಸಂಘದ ಸೊಸೈಟಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಾರಿ ಮಾಡುವುದು ಹಾಗೂ ಹೊರಗುತ್ತಿಗೆ ಸಿಬ್ಬಂದಿಗಳ ಹಲವು ಬೇಡಿಕೆಗಳನ್ನು ಈಡೇರಿಸುವ ಸಂಬಂಧ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಪ್ರಸ್ತುತ 2593 ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ಬಾಲಕ / ಬಾಲಕಿಯರ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಈ ನಿಲಯಗಳಿಗೆ ಒಟ್ಟು 11734 ಗ್ರೂಪ್-ಡಿ ವೃಂದದ ಅಡುಗೆಯವರು, ಅಡುಗೆ ಸಹಾಯಕರು ಹಾಗೂ ಕಾವಲುಗಾರರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ, 4775 ಹುದ್ದೆಗಳು ಭರ್ತಿಯಾಗಿದ್ದು 6959 ಹುದ್ದೆಗಳು ಖಾಲಿ ಇರುತ್ತದೆ. ಈ ಖಾಲಿ ಇರುವ ಹುದ್ದೆಗಳಿಗೆ ನಿಲಯಗಳ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಜಿಲ್ಲಾ ಮಟ್ಟದಲ್ಲಿ ಹೊರ ಸಂಪನ್ಮೂಲ ಏಜೆನ್ಸಿಗಳ ಮೂಲಕ ಹೊರ ಸಂಪನ್ಮೂಲ ಸಿಬ್ಬಂದಿಗಳ ಸೇವೆಯನ್ನು ಪಡೆದುಕೊಳ್ಳಲಾಗುತ್ತಿರುತ್ತದೆ. ರಾಜ್ಯದ 176 ತಾಲ್ಲೂಕುಗಳಿಗೆ ಗ್ರೂಪ್-ಸಿ ವೃಂದದ ಒಟ್ಟು 176 ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳು ಮಂಜೂರಾಗಿದ್ದು, ಈ ಹುದ್ದೆಗಳಿಗೆ ಹೊರ ಸಂಪನ್ಮೂಲ ಸಿಬ್ಬಂದಿಗಳ ಸೇವೆಯನ್ನು ಪಡೆದುಕೊಳ್ಳಲಾಗಿರುತ್ತದೆ. ಕಾರ್ಮಿಕ ಇಲಾಖೆಯಿಂದ ಪ್ರತಿ ವರ್ಷ ಏಪ್ರಿಲ್ ಒಂದನೇ ತಾರೀಖಿನಿಂದ ಅನ್ವಯಿಸುವಂತೆ ಕನಿಷ್ಠ ವೇತನ ಕಾಯ್ದೆಯಡಿ ನಿಗಧಿಪಡಿಸುವ ವೇತನದ ದರಗಳನ್ನು ಮಾನದಂಡವಾಗಿ ಇಟ್ಟುಕೊಂಡು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹೊರಸಂಪನ್ಮೂಲ ಏಜೆನ್ಸಿ ಮೂಲಕ ನೇಮಕಗೊಂಡ ಸಿಬ್ಬಂದಿಗಳಿಗೆ ವೇತನ ಪಾವತಿಸಲಾಗುತ್ತದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಲ್ಬುರ್ಗಿ ಜಿಲ್ಲೆಯಲ್ಲಿ ಒಟ್ಟು 134 ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ಬಾಲಕರ / ಬಾಲಕಿಯರ ವಿದ್ಯಾರ್ಥಿ ನಿಲಯಗಳು ಕಾರ್ಯ ನಿರ್ವಹಿಸುತ್ತಿದ್ದು, ಈ ನಿಲಯಗಳಿಗೆ ಒಟ್ಟು 574 ಗ್ರೂಪ್ ಡಿ ವೃಂದದ ಅಡುಗೆಯವರು / ಅಡುಗೆ ಸಹಾಯಕರು / ಕಾವಲುಗಾರರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 279 ಹುದ್ದೆಗಳು ಭರ್ತಿಯಾಗಿದ್ದು, 295 ಹುದ್ದೆಗಳು ಖಾಲಿ ಇರುತ್ತದೆ ಹಾಗೂ ಜಿಲ್ಲೆಯಲ್ಲಿನ 07 ತಾಲ್ಲೂಕು ಕಛೇರಿಗಳಿಗೆ ಮಂಜೂರಾಗಿರುವ 07 ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳಿಗೂ ಸಹ ಹೊರ ಸಂಪನ್ಮೂಲ ಏಜೆನ್ಸಿ ಮೂಲಕ ಸಿಬ್ಬಂದಿಗಳ ಸೇವೆಯನ್ನು ಪಡೆದುಕೊಳ್ಳಲಾಗಿರುತ್ತದೆ. ವಿವರ ಕೆಳಕಂಡಂತಿರುತ್ತದೆ.

| ಕ್ರ ಸಂ | ಹುದ್ದೆಗಳ ವಿವರ | ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ | ಹೊರ ಸಂಪನ್ಮೂಲ ಸಂಸ್ಥೆಯಿಂದ ಪಡೆದ ಸಿಬ್ಬಂದಿಗಳ ಸಂಖ್ಯೆ |
|---|---|---|---|---|---|
| 1 | ಡಾಟಾ ಎಂಟ್ರಿ ಅಪರೇಟರ್ | 7 | 0 | 7 | 7 |
| 2 | ಅಡುಗೆಯವರು | 328 | 170 | 158 | 158 |
| 3 | ಅಡುಗೆ ಸಹಾಯಕರು | 201 | 109 | 92 | 92 |
| 4 | ರಾತ್ರಿ ಕಾವಲುಗಾರರು | 45 | 0 | 45 | 45 |
| **ಒಟ್ಟು** | | **581** | **279** | **302** | **302** |

ಸದರಿ ಖಾಲಿ ಇರುವ 07 ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳು ಹಾಗೂ 295 ಗ್ರೂಪ್ ಡಿ ಹುದ್ದೆಗಳಾದ ಅಡುಗೆಯವರು / ಅಡುಗೆ ಸಹಾಯಕರು / ಕಾವಲುಗಾರರ ಹುದ್ದೆಗಳಿಗೆ ಜಿಲ್ಲಾ ಮಟ್ಟದಲ್ಲಿ ಟೆಂಡರ್ ಆಹ್ವಾನಿಸಿ, ಕಡಿಮೆ ಸೇವಾ ಶುಲ್ಕ ನಮೂದಿಸಿದ ಹೊರ ಸಂಪನ್ಮೂಲ ಸಂಸ್ಥೆಯಾದ ಮೆ:ಮನಿಷ್ ಮ್ಯಾನ್‌ಪವರ್ ಏಜೆನ್ಸಿ, ಕಲಬುರಗಿ ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕಲಬುರಗಿ ಇವರಿಗೆ ದಿನಾಂಕ: 01-03-2024 ರಿಂದ ಸಿಬ್ಬಂದಿಗಳ ಸೇವೆಯನ್ನು ಒದಗಿಸಲು ಆದೇಶ ನೀಡಲಾಗಿರುತ್ತದೆ. ಸದರಿ ಏಜೆನ್ಸಿಯವರು ಕಲ್ಬುರ್ಗಿ ಜಿಲ್ಲೆಯಲ್ಲಿನ ವಲಯ-1 ಮತ್ತು ವಲಯ-2 ರಡಿ ಕಾರ್ಯನಿರ್ವಹಿಸುತ್ತಿರುವ ಹೊರಸಂಪನ್ಮೂಲ ಸಿಬ್ಬಂದಿಗಳಿಗೆ ಪಾವತಿಸಲಾಗುತ್ತಿರುವ ವೇತನದ ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ.

ಏಜೆನ್ಸಿಯವರು ಹೊರ ಸಂಪನ್ಮೂಲ ಸಿಬ್ಬಂದಿಗಳಿಗೆ ಪ್ರತಿ ಮಾಹೆಯ ವೇತನವನ್ನು ಆರ್.ಟಿ.ಜಿ.ಎಸ್ ಮೂಲಕ ಸಂಬಂಧಿಪಟ್ಟ ಸಿಬ್ಬಂದಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡುತ್ತಿದ್ದು, ವೇತನವನ್ನು ಜಮೆ ಮಾಡಿರುವ ಬಗ್ಗೆ ದೃಢಪಡಿಸಿಕೊಳ್ಳಲಾಗಿರುತ್ತದೆ. ಹಾಗೂ ಹೊರ ಸಂಪನ್ಮೂಲ ಸಿಬ್ಬಂದಿಗಳಿಗೆ ಪ್ರತಿ ತಿಂಗಳು ವೇತನ, ಇಪಿಎಫ್ ಮತ್ತು ಇಎಸ್ಐ ಯನ್ನು ನಿಯಮಾನುಸಾರ ಏಜೆನ್ಸಿಯವರು ಹೊರ ಸಂಪನ್ಮೂಲ ಸಿಬ್ಬಂದಿಗಳ ಖಾತೆಗೆ ಜಮೆ ಮಾಡುತ್ತಿರುವುದನ್ನು ಸಹ ದೃಢಪಡಿಸಿಕೊಳ್ಳಲಾಗುತ್ತಿದೆ. ಈ ಬಗ್ಗೆ ಪರಿಶೀಲನೆ ಮಾಡಿ ದೃಢಪಡಿಸಿಕೊಂಡ ನಂತರ ಮುಂದಿನ ತಿಂಗಳ ವೇತನವನ್ನು ಏಜೆನ್ಸಿಯವರಿಗೆ ಪಾವತಿಸಲಾಗುತ್ತಿದೆ.

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ಬಿ.ಜಿ.ಪಾಟೀಲ್ ಇವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಅನುಬಂಧ

| SL NO | DESIGNATOI N | salary | (B) Deduction From Employees Salary As Employees Contributions | | | | | (C )Employees Share Contribution Towards Deductions (To be Department) | | | (D) Service Charges | GST@18% | | | Grand Total (C+K+LO) Total Salary By Departme nt ) |
|---|---|---|---|---|---|---|---|---|---|---|---|---|---|---|---|
| | | {Basic + VDA} Gross wages | EPF {12% OF C} | ESI {0.75% OF C} | PT | TOTAL Deducti on {D:F} | Take Home Salary {C-G} | EPF {13% of C} | ESI {3.25% of C} | Total Employees Contributions {I+J} | Service Charges {3% of C+K} | SGST @9% {C+K+L } | CGST @9% {C+K+L } | Total Tax {M+N} | |
| A | B | C | D | E | F | G | H | I | J | K | L | M | N | O | P |
| | | | | | | | ವಲಯ-1 | | | | | | | | |
| 1 | ಡೇಟಾ ಎಂಟ್ರಿ ಆಪರೇಟರ್ | 18787 | 2254 | 141 | 0 | 2395 | 16392 | 2442 | 611 | 3053 | 655 | 2025 | 2025 | 4049 | 26544 |
| 2 | ಅಡುಗೆ ಯವರು | 17766 | 2132 | 133 | 0 | 2265 | 15501 | 2310 | 577 | 2887 | 656 | 1918 | 1918 | 3836 | 25145 |
| 3 | ಅಡುಗೆ ಸಹಾಯಕರು | 16589 | 1991 | 124 | 0 | 2115 | 14474 | 2157 | 539 | 2696 | 657 | 1795 | 1795 | 3590 | 23531 |
| 4 | ಕಾವಲು ಗಾರರು | 15283 | 1834 | 115 | 0 | 1949 | 13334 | 1987 | 497 | 2483 | 658 | 1658 | 1658 | 3316 | 21741 |
| | | | | | | | ವಲಯ-2 | | | | | | | | |
| 1 | ಡೇಟಾ ಎಂಟ್ರಿ ಆಪರೇಟರ್ | 17952 | 2154 | 134 | 200 | 2288 | 15663 | 2333 | 583 | 2917 | 626 | 1934 | 1934 | 3869 | 25365 |
| 2 | ಅಡುಗೆ ಯವರು | 15068 | 1808 | 113 | 0 | 1921 | 13147 | 1958 | 489 | 2448 | 525 | 0.00 | 0.00 | 0.00 | 18042 |
| 3 | ಅಡುಗೆ ಸಹಾಯಕರು | 14096 | 1691 | 105 | 0 | 1797 | 12298 | 1832 | 458 | 2290 | 491 | 0.00 | 0.00 | 0.00 | 16878 |
| 4 | ಕಾವಲು ಗಾರರು | 12908 | 1549 | 96 | 0 | 1645 | 11263 | 1678 | 419 | 2097 | 450 | 0.00 | 0.00 | 0.00 | 15456 |

(83 d)

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ ಜಿ ಪಾಟೀಲ್ ಇವರ ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಉತ್ತರ

*********

**ಪ್ರಶ್ನೆ:-**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕಳೆದ 15-20 ವರ್ಷಗಳಿಂದ ಕಡಿಮೆ ಸಂಬಳಕ್ಕೆ ವಸತಿ ನಿಲಯ-ಶಾಲಾ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಅಡುಗೆಯವರು, ಡಾಟಾ ಎಂಟ್ರಿ ಆಪರೇಟರ್‌ಗಳು, ಹೊರಗುತ್ತಿಗೆ ಶಿಕ್ಷಕರು, ದಿನಗೂಲಿ ನೌಕರರು ಯಾವುದೇ ಸೇವಾ ಭದ್ರತೆ ಇಲ್ಲದೆ ನಿರಂತರವಾಗಿ ಕೆಲಸ ಮಾಡುತ್ತಾ ಬಂದಿರುತ್ತಾರೆ. ಗುತ್ತಿಗೆದಾರರು, ವಾರ್ಡನ್‌ರವರು, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಹೊರಗುತ್ತಿಗೆ ಸಿಬ್ಬಂದಿಗಳನ್ನು ಶೋಷಣೆ ಮಾಡುತ್ತಿರುತ್ತಾರೆ, ಸದರಿ ನೌಕರರನ್ನು ಖಾಯಂ ಮಾಡುವುದರ ಜೊತೆಗೆ, ಅವರ ಶೋಷಣೆಯನ್ನು ಹೊಗಲಾಡಿಸಿ, ಅವರ ಮಾಸಿಕ ವೇತನವನ್ನು ಕನಿಷ್ಠ 31000/-ಕ್ಕೆ ಏರಿಸುವುದರ ಜೊತೆಗೆ, ಬೀದರ್ ಮಾದರಿಯಲ್ಲಿ ಸಹಕಾರ ಸಂಘದ ಸೊಸೈಟಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಾರಿ ಮಾಡುವುದು ಹಾಗೂ ಹೊರಗುತ್ತಿಗೆ ಸಿಬ್ಬಂದಿಗಳ ಹಲವು ಬೇಡಿಕೆಗಳನ್ನು ಈಡೇರಿಸುವ ಸಂಬಂಧ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಒಟ್ಟು 825 ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ಅಲ್ಪಸಂಖ್ಯಾತರ ಪದವಿ ಪೂರ್ವ ವಸತಿ ಕಾಲೇಜು, ಮೌಲಾನಾ ಆಜಾದ್ ಮಾದರಿ ಶಾಲೆ ವಿದ್ಯಾರ್ಥಿನಿಲಯಗಳು ಮತ್ತು ಜಿಲ್ಲಾ/ತಾಲ್ಲೂಕು ಕಛೇರಿಗಳಲ್ಲಿ ಒಟ್ಟು 9282 ವಿವಿಧ ವೃಂದದ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 2185 ಹುದ್ದೆಗಳು ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗಿದ್ದು, 2663 ಹುದ್ದೆಗಳನ್ನು ಅತಿಥಿ ಉಪನ್ಯಾಸಕರು/ಶಿಕ್ಷಕರ ಸೇವೆಯನ್ನು ಪಡೆಯಲಾಗುತ್ತಿದೆ. ಒಟ್ಟು 3729 ಗ್ರೂಪ್ ಸಿ & ಡಿ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಸಿಬ್ಬಂದಿಗಳನ್ನು ಪಡೆಯಲಾಗಿದೆ.

| ವೃಂದ | ಮಂಜೂರಾದ ಸಂಖ್ಯೆ | ಖಾಯಂ ಸಿಬ್ಬಂದಿಗಳ ಸಂಖ್ಯೆ | ಅತಿಥಿ ಶಿಕ್ಷಕರು/ ಉಪನ್ಯಾಸಕರ ಸಂಖ್ಯೆ | ಹೊರ ಸಂಪನ್ಮೂಲ ಸಿಬ್ಬಂದಿಗಳ ಸಂಖ್ಯೆ |
|---|---|---|---|---|
| ಬೋಧಕ ಸಿಬ್ಬಂದಿ | 4143 | 1480 | 2663 | 00 |
| ಬೋಧಕೇತರ ಸಿಬ್ಬಂದಿ | 1622 | 702 | - | 215 |
| ಗ್ರೂಪ್-ಡಿ | 3517 | 03 | - | 3514 |
| ಒಟ್ಟು | 9282 | 2185 | 2663 | 3729 |

ಸರ್ಕಾರದ ಆದೇಶದಂತೆ ಅಲ್ಪಸಂಖ್ಯಾತರ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು, ಅತಿಥಿ ಶಿಕ್ಷಕರುಗಳಿಗೆ ಮಾಹೆಯಾನ ಕ್ರಮವಾಗಿ ರೂ.18,150/- & ರೂ.16,650/-ನ್ನು ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆಯ ಉಪನ್ಯಾಸಕರು, ಅತಿಥಿ ಶಿಕ್ಷಕರುಗಳಿಗೆ ಮಾಹೆಯಾನ ರೂ.12000/- & ರೂ.10500/-ಗಳ ಗೌರವ ಧನವನ್ನು ಪಾವತಿಸಲಾಗುತ್ತಿದೆ.

.....2.

ಮುಂದುವರೆದು ಕಾರ್ಮಿಕ ಇಲಾಖೆಯು ವಲಯವಾರು ನಿಗಧಿಪಡಿಸಿರುವ ಕನಿಷ್ಠ ವೇತನದ ಅನುಸಾರ ವಸತಿ ಶಾಲೆ, ಕಾಲೇಜುಗಳು, ವಿದ್ಯಾರ್ಥಿನಿಲಯಗಳು ಮತ್ತು ಜಿಲ್ಲಾ/ತಾಲ್ಲೂಕು ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ಸಿಬ್ಬಂದಿಗಳಿಗೆ ವೇತನವನ್ನು ಪಾವತಿಸಲಾಗುತ್ತಿದೆ ಹಾಗೂ ನಿಯಮಾನುಸಾರ ESI, EPF ಹಾಗೂ ಇತರೆ ಸೌಲಭ್ಯಗಳನ್ನು ಹೊರಸಂಪನ್ಮೂಲ ಏಜೆನ್ಸಿಗಳ ಮೂಲಕ ಜಿಲ್ಲಾ ಹಂತದಲ್ಲಿ ಸಿಬ್ಬಂದಿಗಳಿಗೆ ಒದಗಿಸಲಾಗುತ್ತಿದೆ.

ಗುತ್ತಿಗೆದಾರರು, ವಾರ್ಡನ್ ರವರು, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಹೊರಗುತ್ತಿಗೆ ಸಿಬ್ಬಂದಿಗಳನ್ನು ಶೋಷಣೆ ಮಾಡುತ್ತಿರುವ ಯಾವುದೇ ಪ್ರಕರಣಗಳು ಪ್ರಸ್ತುತದವರೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ದಾಖಲಾಗಿರುವುದು ಕಂಡುಬಂದಿರುವುದಿಲ್ಲ.

ಮುಂದುವರೆದು, ಸದರಿ ಹೊರಗುತ್ತಿಗೆ ಸಿಬ್ಬಂದಿಗಳನ್ನು ಖಾಯಂ ಮಾಡಿ ಅವರ ಮಾಸಿಕ ವೇತನವನ್ನು ಕನಿಷ್ಠ 31000/-ಕ್ಕೆ ಏರಿಸುವುದರ ಜೊತೆಗೆ, ಬೀದರ್ ಮಾದರಿಯಲ್ಲಿ ಸಹಕಾರ ಸಂಘದ ಸೊಸೈಟಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಾರಿ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ ಹಾಗೂ ಹೊರಗುತ್ತಿಗೆ ಸಿಬ್ಬಂದಿಗಳ ಹಲವು ಬೇಡಿಕೆಗಳನ್ನು ಈಡೇರಿಸುವ ಬಗ್ಗೆ ನಿಯಾಮಾನುಸಾರ ಪರಿಶೀಲಿಸಲಾಗುವುದು.

**ಕಡತ ಸಂಖ್ಯೆ:MWD 53 LMQ 2025**

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು